
KARNATAKA LALITAKALA ACADEMY
"NATIONAL SEMIN


ಕರ್ನಾಟಕ ಲಲಿತಕಲಾ ಅಕಾಡೆಮಿ ಹಾಗೂ ಮಂಗಳೂರು ವಿಶ್ವವಿದ್ಯಾನಿಲಯ
KARNATAKA LALITAKALA ACADEMY AND MANGALORE UNIVERSITY
ಎನ್.ಜಿ.ಪಾವಂಜೆ ಪೀಠ / N.G.PAVANJE CHAIR IN FINE ART
"ರಾಷ್ಟ್ರೀಯ ವಿಚಾರ ಸಂಕಿರಣ" / "NATIONAL SEMINAR"
ಕರಾವಳಿ ಪರಂಪರೆ ಮತ್ತು ಕಲೆ ಹಾಗೂ ಕರಾವಳಿ ಜಿಲ್ಲೆಗಳಲ್ಲಿ ಆಧುನಿಕ ಕಲೆಯ ವಿಕಾಸ
ART AND CULTURAL HERITAGE OF COASTAL KARNATAKA AND EVOLUTION OF MODERN ART


KARNATAKA LALITAKALA ACADEMY
"ರಾಷ್ಟ್ರೀಯ ವಿಚಾರ ಸಂಕಿರಣ"
ART AND CULTURAL HERITAGE OF COASTAL KARNATAKA AND







ಶನಿವಾರ | 7 ಏಪ್ರಿಲ್ | 2018
VIJAYAVANI • 7 APRIL 2018

# ಯಕ್ಷಗಾನ ದೈವಾರಾಧನೆ ಕಲೆಗಳ ಬಣ್ಣಗಾರಿಕೆ ಅಧ್ಯಯನ

## ರೋಶನಿ ನಿಲಯದಲ್ಲಿ ವಿಚಾರ ಸಂಕಿರಣ ಉದ್ಘಾಟಿಸಿ ಹಿರಿಯ ಸಂಶೋಧಕ ಡಾ.ಪುಂಡಿಕ್ಯಾ ಗಣಪಯ್ಯ ಭಟ್ ಆಶಯ

■ ವಿಜಯವಾಣಿ ಸುದ್ದಿಜಾಲ ಮಂಗಳೂರು

ಕರಾವಳಿಯಲ್ಲಿ ಚಿತ್ರಕಲೆಗೆ ಇನ್ನೂರು ವರ್ಷಗಳ ಇತಿಹಾಸವಿದ್ದರೂ, ಹಳೇ ಪರಂಪರೆಯ ಚಿತ್ರಕಲೆಯ ಕುರಿತ ಸರಿಯಾದ ಮಾಹಿತಿ ನಮಗೆ ಸಿಗುತ್ತಿಲ್ಲ ಎಂದು ಹಿರಿಯ ಸಂಶೋಧಕ ಡಾ.ಪುಂಡಿಕ್ಯಾ ಗಣಪಯ್ಯ ಭಟ್ ಹೇಳಿದರು.

▸ ಯುವ ಸಮುದಾಯ ಕಲೆ ಅಧ್ಯಯನದಲ್ಲಿ ತೊಡಗಲಿ

ಮಂಗಳೂರು ವಿಶ್ವವಿದ್ಯಾಲಯ, ಎನ್‌ಜಿ ಪಾವಂಜೆ ಲಲಿತಕಲಾ ಪೀಠ ಮತ್ತು ರಾಜ್ಯ ಲಲಿತಕಲಾ ಅಕಾಡೆಮಿ ಸಹಯೋಗದಲ್ಲಿ ನಗರದ ರೋಶನಿ ನಿಲಯದಲ್ಲಿ ಶುಕ್ರವಾರ ಎರಡು ದಿನಗಳ ಕಾಲ ನಡೆಯಲಿರುವ 'ಕರಾವಳಿ ಪರಂಪರೆ ಮತ್ತು ಕಲೆ ಹಾಗೂ ಕರಾವಳಿ ಜಿಲ್ಲೆಗಳಲ್ಲಿ ಆಧುನಿಕ ಕಲೆಯ ವಿಕಾಸ' ಎಂಬ ವಿಷಯದ ಕುರಿತ ರಾಷ್ಟ್ರೀಯ ವಿಚಾರ ಸಂಕಿರಣದಲ್ಲಿ ಅವರು ದಿಕ್ಸೂಚಿ ಭಾಷಣ ಮಾಡಿದರು.

ಮೂಡುಬಿದಿರೆಯಲ್ಲಿ ಲಭ್ಯವಿರುವ ತಾಳೆಗರಿಗಳಲ್ಲಿ ಇರುವ ಚಿತ್ರಗಳು ಶ್ರವಣಬೆಳಗೊಳ, ಬಂಕಾಪುರದಿಂದ ಬಂದವು ಎಂಬ ಬಗ್ಗೆ ಚರ್ಚೆಯಾಗುತ್ತಿದೆ. ಅದೇ ರೀತಿ ನಗರದ ಅಲೋಶಿಯಸ್ ಚಾಪೆಲ್‌ನಲ್ಲಿರುವ ಚಿತ್ರಗಳು ವಿದೇಶಿ ಕಲಾವಿದರು ರಚಿಸಿರುವುದರಿಂದ ಅವು ತುಳುನಾಡಿನ ಚಿತ್ರ ಎಂದು ಪರಿಗಣಿಸುವಂತಿಲ್ಲ. ಆದರೆ, ಜಾನಪದ, ಯಕ್ಷಗಾನ, ಭೂತಾರಾಧನೆ ಬಣ್ಣಗಾರಿಕೆಯನ್ನೂ ಚಿತ್ರಕಲೆ ಎಂದು ಪರಿಗಣಿಸಬಹುದು. ಈ ನಿಟ್ಟಿನಲ್ಲಿ ಇನ್ನಷ್ಟು ಹೆಚ್ಚಿನ ಅಧ್ಯಯನವಾಗಬೇಕು ಎಂದರು.



ವಿಜಯವಾಣಿ ಚಿತ್ರ

ನಗರದ ರೋಶನಿ ನಿಲಯದಲ್ಲಿ 'ಕರಾವಳಿ ಪರಂಪರೆ ಮತ್ತು ಕಲೆ ಹಾಗೂ ಕರಾವಳಿ ಜಿಲ್ಲೆಗಳಲ್ಲಿ ಆಧುನಿಕ ಕಲೆಯ ವಿಕಾಸ' ರಾಷ್ಟ್ರೀಯ ವಿಚಾರ ಸಂಕಿರಣ ಉದ್ಘಾಟಿಸಿ ಅನಸೂಯ ಪಾವಂಜೆ ಮಾತನಾಡಿರು.

ವಿಚಾರ ಸಂಕಿರಣ ಉದ್ಘಾಟಿಸಿದ ಕರ್ನಾಟಕ ಕ್ರಾಫ್ಟ್ ಕೌನ್ಸಿಲ್ ಮಾಜಿ ಕಾರ್ಯದರ್ಶಿ ಅನಸೂಯ ಪಾವಂಜೆ, ಯುವ ಸಮುದಾಯ ಕಲೆ ಅಧ್ಯಯನ ಕೈಬಿಡಬಾರದು. ಆಧುನಿಕ ಕಲೆ ತನಗೆ ಅರ್ಥವಾಗದಿದ್ದರೂ ಅಲ್ಲಿನ ಬಣ್ಣಗಳ ಸಂಯೋಜನೆ ಉತ್ತಮವಾಗಿದೆ. ತನ್ನ ತಂದೆ ಎನ್.ಜಿ. ಪಾವಂಜೆ ಅವರು ಚಿತ್ರಕಲೆಯ ಬೆಳವಣಿಗೆಗಾಗಿ ಶ್ರಮಿಸಿದವರು. ಮೈಸೂರು ಅರಸರ ಆಸ್ಥಾನದಲ್ಲಿ ಚಿತ್ರಕಲೆ ಬಿಡಿಸುತ್ತಿದ್ದ ಬಗ್ಗೆ ತನಗೆ ನೆನಪುಗಳಿವೆ. ಕಲೆ ಬೆಳೆಯಬೇಕು ಎಂದರು.

ಹಿರಿಯ ಕಲಾವಿದ ಪಿ.ಎಸ್.ಪುಣಿಚಿತ್ತಾಯ ಕಾಸರಗೋಡು, ಉಡುಪಿ ಆರ್ಟಿಸ್ಟ್ಸ್ ಫೋರಂ ಅಧ್ಯಕ್ಷ ರಮೇಶ್ ರಾವ್ ಅತಿಥಿಗಳಾಗಿದ್ದರು. ರಾಜ್ಯ ಲಲಿತಕಲಾ ಅಕಾಡೆಮಿ ಅಧ್ಯಕ್ಷೆ ಪ್ರೊ.ಎಂ.ಜೆ.ಕಮಲಾಕ್ಷಿ ಆಶಯ ನುಡಿಗಳನ್ನಾಡಿದರು. ಮಂಗಳೂರು ವಿವಿ ಕುಲಪತಿ ಪ್ರೊ.ಕೆ.ಭೈರಪ್ಪ ಅಧ್ಯಕ್ಷತೆ ವಹಿಸಿದ್ದರು. ಲಲಿತಕಲಾ ಅಕಾಡೆಮಿ ರಿಜಿಸ್ಟ್ರಾರ್ ಇಂದ್ರಮ್ಮ, ಎನ್.ಜಿ.ಪಾವಂಜೆ ಲಲಿತಕಲಾ ಪೀಠ ಸಂಯೋಜಕ ಪ್ರೊ. ಕೆ.ಕೃಷ್ಣ ಶರ್ಮ ಉಪಸ್ಥಿತರಿದ್ದರು.

ವಿಚಾರ ಸಂಕಿರಣ ಸಂಯೋಜಕ ಪ್ರೊ.ರವಿಶಂಕರ ರಾವ್ ಸ್ವಾಗತಿಸಿದರು. ಡಾ.ನೇಮಿರಾಜ್ ಪ್ರಸ್ತಾವಿಸಿದರು.

ವಿಚಾರ ಸಂಕಿರಣ ಅಂಗವಾಗಿ ನಡೆದ ಕಲಾ ಪ್ರದರ್ಶನದಲ್ಲಿ 29 ಮಂದಿ ಕಲಾವಿದರ ಕಲಾಕೃತಿ ಪ್ರದರ್ಶನಗೊಂಡಿತು. ಎರಡು ದಿನಗಳ ಕಾಲ ವಿವಿಧ ಗೋಷ್ಠಿಗಳು ನಡೆಯಲಿದ್ದು, ಕಲಾವಿದರು ವಿವಿಧ ವಿಚಾರಗಳ ಬಗ್ಗೆ ವಿಷಯ ಮಂಡಿಸಲಿದ್ದಾರೆ. ಶನಿವಾರ ಸಾಯಂಕಾಲ ಸಮಾರೋಪ ಸಮಾರಂಭ ನಡೆಯಲಿದೆ.

---

ಹೊಸ ದಿಗಂತ
ಶನಿವಾರ
7 ಏಪ್ರಿಲ್ 2018

### ಕರಾವಳಿ ಪರಂಪರೆ, ಕಲೆ ಹಾಗೂ ಕರಾವಳಿ ಜಿಲ್ಲೆಗಳಲ್ಲಿ ಆಧುನಿಕ ಕಲೆಯ ವಿಕಾಸ ವಿಷಯದ ವಿಚಾರಸಂಕಿರಣ

# ಯಕ್ಷಗಾನ, ಭೂತ ಬಣ್ಣಗಾರಿಕೆ ಬಗ್ಗೆ ಅಧ್ಯಯನ ಅಗತ್ಯ

▸ ದಿಗಂತ ವರದಿ : ಮಂಗಳೂರು, ಏ.6

ಕರಾವಳಿಯಲ್ಲಿ ಪರಂಪರೆಯ ಹಳೆಯ ಚಿತ್ರಕಲೆಯ ಬಗ್ಗೆ ಮಾಹಿತಿ ದೊರೆಯುತ್ತಿಲ್ಲ, ಚಿತ್ರಕಲೆಗೆ ಕರಾವಳಿಯಲ್ಲಿ 200 ವರ್ಷಗಳ ಇತಿಹಾಸವಿದೆ. ಆದರೆ, ಜಾನಪದ, ಯಕ್ಷಗಾನ, ಭೂತಾರಾಧನೆ ಬಣ್ಣಗಾರಿಕೆಯನ್ನೂ ಚಿತ್ರಕಲೆ ಎಂದು ಪರಿಗಣಿಸಬಹುದು. ಈ ನಿಟ್ಟಿನಲ್ಲಿ ಇನ್ನಷ್ಟು ಹೆಚ್ಚಿನ ಅಧ್ಯಯನ ಆಗಲಿ ಎಂದು ಹಿರಿಯ ಸಂಶೋಧಕ ಡಾ. ಪುಂಡಿಕಾಯಿ ಗಣಪಯ್ಯ ಭಟ್ ಹೇಳಿದರು.

ಮಂಗಳೂರು ವಿಶ್ವವಿದ್ಯಾಲಯ ಎನ್‌ಜಿ ಪಾವಂಜೆ ಲಲಿತಕಲಾ ಪೀಠ ಮತ್ತು ರಾಜ್ಯ ಲಲಿತಕಲಾ ಅಕಾಡೆಮಿ ಸಹಯೋಗದೊಂದಿಗೆ ನಗರದ ರೋಶನಿ ನಿಲಯದಲ್ಲಿ ಶುಕ್ರವಾರ 'ಕರಾವಳಿ ಪರಂಪರೆ ಮತ್ತು ಕಲೆ ಹಾಗೂ ಕರಾವಳಿ ಜಿಲ್ಲೆಗಳಲ್ಲಿ ಆಧುನಿಕ ಕಲೆಯ ವಿಕಾಸ' ಎಂಬ ವಿಷಯದ ಕುರಿತ ರಾಷ್ಟ್ರೀಯ ವಿಚಾರ ಸಂಕಿರಣ ಉದ್ಘಾಟನಾ ಸಮಾರಂಭದಲ್ಲಿ ದಿಕ್ಸೂಚಿ ಭಾಷಣ ಮಾಡಿದರು.

ಅವಿಭಜಿತ ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಚಿತ್ರಕಲೆಯ ಬಗ್ಗೆ ಎಲ್ಲಿಯೂ ಮಾಹಿತಿ ಲಭ್ಯವಿಲ್ಲ, ಮೂಡುಬಿದರೆಯಲ್ಲಿ ಲಭ್ಯವಿರುವ ತಾಳೆಗರಿಗಳಲ್ಲಿ ಇರುವ ಚಿತ್ರಗಳು ಶ್ರವಣಬೆಳಗೊಳ, ಬಂಕಾಪುರದಿಂದ ಬಂದವು ಎಂಬ ಬಗ್ಗೆ ಚರ್ಚೆ ಇದೆ. ಮಂಗಳೂರಿನ ಅಲೋಶಿಯಸ್ ಚಾಪೆಲ್‌ನಲ್ಲಿರುವ ಚಿತ್ರಗಳನ್ನು ವಿದೇಶಿ ಚಿತ್ರಕಾರ ಬಿಡಿಸಿದ ಕಾರಣ ಅದನ್ನು ತುಳುನಾಡಿನ ಚಿತ್ರ ಎಂದು ಪರಿಗಣಿಸುವಂತಿಲ್ಲ. ಆದರೆ, ಜಾನಪದ, ಯಕ್ಷಗಾನ, ಭೂತಾರಾಧನೆಯಲ್ಲಿ ಚಿತ್ರಕಾರ ಮತ್ತು ಕ್ಯಾನ್ವಾಸ್ ಒಟ್ಟಿಗೇ ಆಗಿ ಬಣ್ಣಗಾರಿಕೆ ನಡೆಸುವುದು ಚಿತ್ರಕಲೆಯ ಪ್ರಾಕಾರವೇ ಆಗಿದೆ. ಕರಾವಳಿಯಲ್ಲಿ ಆಧುನಿಕ ಕಲೆಯ ವಿಕಾಸ 2 ಶತಮಾನಗಳ ಹಿಂದಿಂದ ನಡೆದ ಬೆಳವಣಿಗೆ. ವಿಚಾರ ಸಂಕಿರಣ ಮೂಲಕ ಈ ಕುರಿತಾದ ಅಧ್ಯಯನ ಗ್ರಂಥ ರಚನೆಗೆ ಪ್ರೇರಣೆ ಆಗಲಿ ಎಂದರು.

ವಿಚಾರ ಸಂಕಿರಣ ಉದ್ಘಾಟಿಸಿ ಮಾತನಾಡಿದ ಕರ್ನಾಟಕ ಕ್ರಾಫ್ಟ್ ಕೌನ್ಸಿಲ್ ಮಾಜಿ ಕಾರ್ಯದರ್ಶಿ ಅನಸೂಯ ಪಾವಂಜೆ, ತನ್ನ ತಂದೆ ಎನ್‌ಜಿ ಪಾವಂಜೆ ಅವರು ಚಿತ್ರಕಲೆಯ ಬೆಳವಣಿಗೆಗಾಗಿ ಶ್ರಮಿಸಿದವರು. ಮೈಸೂರು ಅರಸರ ಆಸ್ಥಾನದಲ್ಲಿ ಚಿತ್ರಕಲೆ ಬಿಡಿಸುತ್ತಿದ್ದ ಬಗ್ಗೆ ತನಗೆ ನೆನಪುಗಳಿವೆ. ಕಲೆ ಬೆಳೆಯಬೇಕು. ಯುವ ಸಮುದಾಯ ಕಲೆ ಅಧ್ಯಯನ ಕೈಬಿಡಬಾರದು. ಆಧುನಿಕ ಕಲೆ ತನಗೆ ಅರ್ಥವಾಗದಿದ್ದರೂ ಅಲ್ಲಿನ ಬಣ್ಣಗಳ ಸಂಯೋಜನೆ ಉತ್ತಮವಾಗಿದೆ ಎಂದರು.

ಹಿರಿಯ ಕಲಾವಿದ ಪಿ.ಎಸ್. ಪುಣಿಚಿತ್ತಾಯ ಕಾಸರಗೋಡು, ಉಡುಪಿ ಆರ್ಟಿಸ್ಟ್ಸ್ ಫೋರಂ ಅಧ್ಯಕ್ಷ ರಮೇಶ್ ರಾವ್ ಅತಿಥಿಯಾಗಿದ್ದರು. ರಾಜ್ಯ ಲಲಿತಕಲಾ ಅಕಾಡೆಮಿ ಅಧ್ಯಕ್ಷೆ ಪ್ರೊ. ಎಂ.ಜೆ. ಕಮಲಾಕ್ಷಿ ಆಶಯ ನುಡಿಗಳನ್ನಾಡಿದರು. ಮಂಗಳೂರು ವಿವಿ ಕುಲಪತಿ ಪ್ರೊ. ಕೆ. ಭೈರಪ್ಪ ಅಧ್ಯಕ್ಷತೆ ವಹಿಸಿದ್ದರು. ಲಲಿತಕಲಾ ಅಕಾಡೆಮಿ ರಿಜಿಸ್ಟ್ರಾರ್ ಇಂದ್ರಮ್ಮ ಎನ್.ಜಿ. ಪಾವಂಜೆ ಲಲಿತಕಲಾ ಪೀಠ ಸಂಯೋಜಕ ಪ್ರೊ. ಕೆ. ಕೃಷ್ಣ ಶರ್ಮ ಉಪಸ್ಥಿತರಿದ್ದರು.

ವಿಚಾರ ಸಂಕಿರಣ ಸಂಯೋಜಕ ಪ್ರೊ. ರವಿಶಂಕರ ರಾವ್ ಸ್ವಾಗತಿಸಿದರು. ಡಾ. ನೇಮಿರಾಜ್ ಪ್ರಾಸ್ತಾವಿಕವಾಗಿ ಮಾತನಾಡಿದರು.

ಬಳಿಕ ವಿವಿಧ ಗೋಷ್ಠಿಯು ನಡೆಯಿತು. ವಿಚಾರ ಸಂಕಿರಣ ಅಂಗವಾಗಿ ನಡೆದ ಕಲಾ ಪ್ರದರ್ಶನದಲ್ಲಿ 29 ಮಂದಿ ಕಲಾವಿದರ ಕಲಾಕೃತಿ ಪ್ರದರ್ಶನಗೊಂಡಿತು. ಏ. 7ರಂದು ಸಂಜೆ 4.30ಕ್ಕೆ ಸಮಾರೋಪ ನಡೆಯಲಿದೆ.




ದಿಗಂತ ಚಿತ್ರ

**ಕರಾವಳಿಯಲ್ಲಿ ಪರಂಪರೆಯ ಹಳೆಯ ಚಿತ್ರಕಲೆಯ ಬಗ್ಗೆ ಮಾಹಿತಿ ದೊರೆಯುತ್ತಿಲ್ಲ. ಚಿತ್ರಕಲೆಗೆ ಕರಾವಳಿಯಲ್ಲಿ 200 ವರ್ಷಗಳ ಇತಿಹಾಸವಿದೆ. ಆದರೆ, ಜಾನಪದ, ಯಕ್ಷಗಾನ, ಭೂತಾರಾಧನೆ ಬಣ್ಣಗಾರಿಕೆಯನ್ನೂ ಚಿತ್ರಕಲೆ ಎಂದು ಪರಿಗಣಿಸಬಹುದು. ಈ ನಿಟ್ಟಿನಲ್ಲಿ ಇನ್ನಷ್ಟು ಹೆಚ್ಚಿನ ಅಧ್ಯಯನ ಆಗಲಿ.**

■ ಡಾ. ಪುಂಡಿಕಾಯಿ ಗಣಪಯ್ಯ ಭಟ್

THE HINDU
SATURDAY, APRIL 7, 2018

## Creativity on canvas



Vice-Chancellor of Mangalore University K. Byrappa looking at a painting during an art exhibition of youth contemporary artists of coastal region, in Mangaluru on Friday. This was held as part of a seminar on 'Art and Cultural Heritage of Coastal Karnataka and Evolution of Modern Art in Coastal District of Karnataka'. The exhibition was organised by the university and Karnataka Lalithakala Academy. • H.S. MANJUNATH

ಪ್ರಜಾವಾಣಿ
ಶನಿವಾರ • ಏಪ್ರಿಲ್ 7, 2018

### ರಾಷ್ಟ್ರಮಟ್ಟದ ವಿಚಾರ ಸಂಕಿರಣ

## ಚಿತ್ರಕಲೆಯಿಂದ ಮೊದಲ ಸಂವಹನ ಆರಂಭ

ಪ್ರಜಾವಾಣಿ ವಾರ್ತೆ

ಮಂಗಳೂರು: 'ಮನುಷ್ಯ ಭಾಷೆ, ಮಾತು ಕಲಿಯುವ ಮೊದಲು ಸಂವಹನ ಮಾಡಲು ಪ್ರಾರಂಭಿಸಿದ್ದು ಚಿತ್ರಕಲೆಯ ಮೂಲಕ. ಕರಾವಳಿ ಪ್ರದೇಶದಲ್ಲಿ ಮನುಷ್ಯನು ಚಿತ್ರಕಲೆಯ ಬಗ್ಗೆ ಹೆಚ್ಚು ಆಸಕ್ತಿಯನ್ನು ಹೊಂದಿದ್ದ ಕುರುಹುಗಳು ಕಂಡುಬರುವುದಿಲ್ಲ' ಎಂದು ಸಂಶೋಧಕ ಪ್ರೊ. ಪುಂಡಿಕಾಯಿ ಗಣಪಯ್ಯ ಭಟ್ ತಿಳಿಸಿದರು.

ಮಂಗಳೂರು ವಿಶ್ವವಿದ್ಯಾಲಯ, ಕರ್ನಾಟಕ ಲಲಿತಕಲಾ ಅಕಾಡೆಮಿ ಹಾಗೂ ಎನ್.ಜಿ. ಪಾವಂಜೆ ಲಲಿತಕಲಾ ಪೀಠದ ವತಿಯಿಂದ ಶುಕ್ರವಾರ ರೋಶನಿ ನಿಲಯದಲ್ಲಿ ಆಯೋಜಿಸಿದ್ದ 'ಕರಾವಳಿ ಪರಂಪರೆ ಮತ್ತು ಕಲೆ, ಕರಾವಳಿ ಜಿಲ್ಲೆಯಲ್ಲಿ ಆಧುನಿಕ ಕಲೆಯ ವಿಕಾಸ' ಎಂಬ ವಿಷಯದ ಕುರಿತ ರಾಷ್ಟ್ರಮಟ್ಟದ ವಿಚಾರ ಸಂಕಿರಣದಲ್ಲಿ ಅವರು ದಿಕ್ಸೂಚಿ ಭಾಷಣದಲ್ಲಿ ಮಾತನಾಡಿದರು.

'ಉಡುಪಿಯ ಗಾಗೋಳಿ ಪ್ರದೇಶದಲ್ಲಿ ಸುಮಾರು ಎರಡೂವರೆ ಸಾವಿರ ವರ್ಷಗಳ ಹಿಂದೆ ಮನುಷ್ಯರು ಬಂಡೆಯಲ್ಲಿ ರಚಿಸಿದ ಗೀರು ಚಿತ್ರಗಳು ಕಂಡುಬಂದಿವೆ. ಆ ಆಧಾರದ ಮೇಲೆ ಕರಾವಳಿಯಲ್ಲಿ ಈ ಕಾಲದಿಂದ ಚಿತ್ರಕಲಾ ಇತಿಹಾಸ ಪ್ರಾರಂಭಿಸಬಹುದು. ಕರಾವಳಿ ಕರ್ನಾಟಕದ ಆರಂಭಿಕ ದೇವಸ್ಥಾನಗಳು ಅತ್ಯಂತ ಸರಳ ರಚನೆಯ ದೇವಾಲಯಗಳು. ಗೋಡೆಯಲ್ಲಿ ಯಾವುದೇ ಶಿಲ್ಪ ಕಲೆಗಳು ಇರುವುದಿಲ್ಲ, ತಾಮ್ರ ಅಥವಾ ಹಂಚಿನ ಚಾವಣಿಯ ರಚನೆಯಿಂದ ಕೂಡಿದ ದೇವಾಲಯಗಳಿದ್ದವು. ಇವತ್ತಿನ ದೇವಾಲಯಗಳು ಮೂಲ ಸ್ವರೂಪದಲ್ಲಿಲ್ಲ. ಇವು ರೂಪಾಂತರಗೊಂಡ ಹೊಸ ರೀತಿಯ ದೇವಾಲಯಗಳಾಗಿವೆ' ಎಂದರು.

ವಿಚಾರ ಸಂಕಿರಣವನ್ನು ಕರ್ನಾಟಕ ಕ್ರಾಫ್ಟ್ಸ್ ಕೌನ್ಸಿಲ್‌ನ ಮಾಜಿ ಕಾರ್ಯದರ್ಶಿ ಅನುಸೂಯ ಪಾವಂಜೆ ಉದ್ಘಾಟಿಸಿದರು. ಮಂಗಳೂರು ವಿಶ್ವವಿದ್ಯಾಲಯದ ಕುಲಪತಿ ಪ್ರೊ.ಕೆ. ಭೈರಪ್ಪ ಅಧ್ಯಕ್ಷತೆ ವಹಿಸಿದ್ದರು. ಕಲಾವಿದ ಪಿ.ಎಸ್.ಪುಣಿಂಚಿತ್ತಾಯ, ಆರ್ಟಿಸ್ಟ್ಸ್ ಫೋರಂನ ಅಧ್ಯಕ್ಷ ರಮೇಶ್ ರಾವ್, ಕರ್ನಾಟಕ ಲಲಿತಕಲಾ ಅಕಾಡೆಮಿಯ ರಿಜಿಸ್ಟ್ರಾರ್ ಇಂದ್ರಮ್ಮ, ಎಚ್.ವಿ ಉಪಸ್ಥಿತರಿದ್ದರು. ಕರ್ನಾಟಕ ಲಲಿತಕಲಾ ಅಕಾಡೆಮಿಯ ಅಧ್ಯಕ್ಷೆ ಪ್ರೊ. ಎಂ.ಜೆ. ಕಮಲಾಕ್ಷಿ ಆಶಯ ಭಾಷಣ ಮಾಡಿದರು. ಕಾರ್ಯಕ್ರಮ ಸಂಯೋಜಕ ಪ್ರೊ. ರವಿಶಂಕರ್ ರಾವ್ ಸ್ವಾಗತಿಸಿದರು. ನೇಮಿರಾಜ್ ಶೆಟ್ಟಿ ಪ್ರಾಸ್ತಾವಿಕ ಮಾತುಗಳನ್ನಾಡಿದರು.



ಮಂಗಳೂರು ವಿಶ್ವವಿದ್ಯಾಲಯ, ಕರ್ನಾಟಕ ಲಲಿತಕಲಾ ಅಕಾಡೆಮಿ ಹಾಗೂ ಎನ್.ಜಿ. ಪಾವಂಜೆ ಲಲಿತಕಲಾ ಪೀಠದ ವತಿಯಿಂದ ಆಯೋಜಿಸಿದ ರಾಷ್ಟ್ರೀಯ ಮಟ್ಟದ ವಿಚಾರ ಸಂಕಿರಣವನ್ನು ಕರ್ನಾಟಕ ಕ್ರಾಫ್ಟ್ಸ್ ಕೌನ್ಸಿಲ್‌ನ ಮಾಜಿ ಕಾರ್ಯದರ್ಶಿ ಅನುಸೂಯ ಪಾವಂಜೆ ಉದ್ಘಾಟಿಸಿದರು.

### ಮುಖ್ಯಾಂಶಗಳು

- 'ಕರಾವಳಿ ಪರಂಪರೆ ಮತ್ತು ಕಲೆ, ಕರಾವಳಿ ಜಿಲ್ಲೆಯಲ್ಲಿ ಆಧುನಿಕ ಕಲೆಯ ವಿಕಾಸ'
- ಉಡುಪಿಯ ಗಾಗೋಳಿಯ ಬಂಡೆಯಲ್ಲಿ ಪ್ರಾಚೀನ ಮನುಷ್ಯರ ಗೀರು ಚಿತ್ರ
- ಕರಾವಳಿ ಪ್ರದೇಶದಲ್ಲಿ ಮನುಷ್ಯನು ಚಿತ್ರಕಲೆ ಆಸಕ್ತಿ ಹೊಂದಿದ ಕುರುಹು ಇಲ್ಲ

ಉದಯವಾಣಿ ಸುದಿನ
ಮಂಗಳೂರು ಸಮಾಚಾರ
ಏಪ್ರಿಲ್ 7 | 2018 | ಶನಿವಾರ

# ಕಲಾ ಪ್ರಕಾರಗಳ ಅಧ್ಯಯನಕ್ಕೆ ಆಸ್ಥೆ ವಹಿಸಲಿ: ಅನಸೂಯ ಪಾವಂಜೆ

**ಮಹಾನಗರ,** ಎ. 6: ಯುವ ಸಮುದಾಯವು ಕಲಾ ಪ್ರಕಾರಗಳ ಅಧ್ಯಯನದ ಬಗ್ಗೆ ವಿಶೇಷ ಆಸ್ಥೆ ವಹಿಸುವುದು ಇಂದಿನ ಅಗತ್ಯ ಎಂದು ಕರ್ನಾಟಕ ಕ್ರಾಫ್ಟ್ಸ್ ಕೌನ್ಸಿಲ್‌ನ ಮಾಜಿ ಕಾರ್ಯದರ್ಶಿ ಅನಸೂಯ ಪಾವಂಜೆ ಹೇಳಿದರು.

ಮಂಗಳೂರು ವಿಶ್ವವಿದ್ಯಾಲಯ, ಎನ್‌ಜಿ ಪಾವಂಜೆ ಲಲಿತಕಲಾ ಪೀಠ ಮತ್ತು ರಾಜ್ಯ ಲಲಿತಕಲಾ ಅಕಾಡೆಮಿ ಸಹಯೋಗದಲ್ಲಿ ನಗರದ ರೋಶನಿ ನಿಲಯದಲ್ಲಿ ಎರಡು ದಿನಗಳ ಕಾಲ ನಡೆಯಲಿರುವ 'ಕರಾವಳಿ ಪರಂಪರೆ ಮತ್ತು ಕಲೆ ಹಾಗೂ ಕರಾವಳಿ ಜಿಲ್ಲೆಗಳಲ್ಲಿ ಆಧುನಿಕ ಕಲೆಯ ವಿಕಾಸ' ಎಂಬ ವಿಷಯದ ಕುರಿತ ರಾಷ್ಟ್ರೀಯ ವಿಚಾರ ಸಂಕಿರಣವನ್ನು ಶುಕ್ರವಾರ ಉದ್ಘಾಟಿಸಿ ಅವರು ಮಾತನಾಡಿದರು.

### ಕಲೆ ಬೆಳೆಯಲಿ

ಆಧುನಿಕ ಕಲೆ ತನಗೆ ಅರ್ಥವಾಗದಿದ್ದರೂ ಅದರಲ್ಲಿನ ಬಣ್ಣಗಳ ಸಂಯೋಜನೆ ಉತ್ತಮವಾಗಿದೆ. ತನ್ನ ತಂದೆ ಎನ್‌ಜಿ ಪಾವಂಜೆ ಅವರು ಚಿತ್ರಕಲೆಯ ಬೆಳವಣಿಗೆಗಾಗಿ ಶ್ರಮಿಸಿದವರು. ಮೈಸೂರು ಅರಸರ ಆಸ್ಥಾನದಲ್ಲಿ ಚಿತ್ರಕಲೆ ಬಿಡಿಸುತ್ತಿದ್ದ ಬಗ್ಗೆ ತನಗೆ ನೆನಪುಗಳಿವೆ. ಕಲೆ ಬೆಳೆಯಬೇಕು ಎಂದರು.

### ಅಧ್ಯಯನ ನಡೆಯಲಿ

ಹಿರಿಯ ಸಂಶೋಧಕ ಡಾ| ಪುಂಡಿಕ್ಕಾಯಿ ಗಣಪಯ್ಯ ಭಟ್ ಮಾತನಾಡಿ, ಕರಾವಳಿಯಲ್ಲಿ ಚಿತ್ರಕಲೆಗೆ ಇನ್ನೂರು ವರ್ಷಗಳ ಇತಿಹಾಸವಿದ್ದರೂ, ಪರಂಪರೆಯ ಚಿತ್ರಕಲೆಯ ಕುರಿತ ಸರಿಯಾದ ಮಾಹಿತಿ ನಮಗೆ ಸಿಗುತ್ತಿಲ್ಲ. ಮೂಡಬಿದಿರೆಯಲ್ಲಿ ಲಭ್ಯವಿರುವ ತಾಳೆಗರಿಗಳಲ್ಲಿ ಇರುವ ಚಿತ್ರಗಳು ಶ್ರವಣಬೆಳಗೊಳ, ಬಂಕಾಪುರದಿಂದ ಬಂದವುಗಳು ಎಂಬ ಬಗ್ಗೆ ಚರ್ಚೆಯಾಗುತ್ತಿದೆ. ಜಾನಪದ, ಯಕ್ಷಗಾನ, ಭೂತಾರಾಧನೆ ಬಣ್ಣಗಾರಿಕೆಯನ್ನೂ ಚಿತ್ರಕಲೆ ಎಂದು ಪರಿಗಣಿಸಬಹುದು. ಈ ನಿಟ್ಟಿನಲ್ಲಿ ಇನ್ನಷ್ಟು ಹೆಚ್ಚಿನ ಅಧ್ಯಯನವಾಗಬೇಕು ಎಂದರು.

ಹಿರಿಯ ಕಲಾವಿದ ಪಿ.ಎಸ್. ಪುಣಿಂಚಿತ್ತಾಯ ಕಾಸರಗೋಡು, ಉಡುಪಿ ಆರ್ಟಿಸ್ಟ್ಸ್ ಫೋರಂ ಅಧ್ಯಕ್ಷ ರಮೇಶ್ ರಾವ್ ಅತಿಥಿಗಳಾಗಿದ್ದರು. ರಾಜ್ಯ ಲಲಿತಕಲಾ ಅಕಾಡೆಮಿ ಅಧ್ಯಕ್ಷೆ ಪ್ರೊ| ಎಂ.ಜೆ. ಕಮಲಾಕ್ಷಿ ಆಶಯ ನುಡಿಗಳನ್ನಾಡಿದರು.

ಮಂಗಳೂರು ವಿವಿ ಕುಲಪತಿ ಪ್ರೊ| ಕೆ. ಭೈರಪ್ಪ ಅಧ್ಯಕ್ಷತೆ ವಹಿಸಿದ್ದರು.

ಲಲಿತಕಲಾ ಅಕಾಡೆಮಿ ರಿಜಿಸ್ಟ್ರಾರ್ ಇಂದ್ರಮ್ಮ, ಎನ್.ಜಿ. ಪಾವಂಜೆ ಲಲಿತಕಲಾ ಪೀಠ ಸಂಯೋಜಕ ಪ್ರೊ| ಕೆ. ಕೃಷ್ಣ ಶರ್ಮ ಮುಖ್ಯ ಅತಿಥಿಗಳಾಗಿದ್ದರು.

ವಿಚಾರ ಸಂಕಿರಣ ಸಂಯೋಜಕ ಪ್ರೊ| ರವಿಶಂಕರ ರಾವ್ ಸ್ವಾಗತಿಸಿ, ಡಾ| ನೇಮಿರಾಜ್ ಪ್ರಾಸ್ತಾವಿಕವಾಗಿ ಮಾತನಾಡಿದರು.




ನಗರದ ರೋಶನಿ ನಿಲಯದಲ್ಲಿ ಎರಡು ದಿನಗಳ ಕಾಲ ನಡೆಯಲಿರುವ ರಾಷ್ಟ್ರೀಯ ವಿಚಾರ ಸಂಕಿರಣಕ್ಕೆ ಚಾಲನೆ ನೀಡಲಾಯಿತು.

### ಕಲಾಕೃತಿ ಪ್ರದರ್ಶನ

ವಿಚಾರ ಸಂಕಿರಣ ಅಂಗವಾಗಿ ನಡೆದ ಕಲಾ ಪ್ರದರ್ಶನದಲ್ಲಿ 29 ಮಂದಿ ಕಲಾವಿದರ ಕಲಾಕೃತಿ ಪ್ರದರ್ಶನಗೊಂಡಿತು. ಎರಡು ದಿನಗಳ ಕಾಲ ವಿವಿಧ ಗೋಷ್ಠಿಗಳು ನಡೆಯಲಿದ್ದು, ಕಲಾವಿದರು ವಿವಿಧ ವಿಚಾರಗಳ ಬಗ್ಗೆ ವಿಷಯ ಮಂಡಿಸಲಿದ್ದಾರೆ. ಶನಿವಾರ ಸಂಜೆ ಸಮಾರೋಪ ನಡೆಯಲಿದೆ. ಕರಾವಳಿಯ ಯುವ ಆಧುನಿಕ ಚಿತ್ರ ಕಲಾವಿದರ ಚಿತ್ರ ಪ್ರದರ್ಶನ ಇಲ್ಲಿದೆ.